**ಹಿರಿಯ ಸಿವಿಲ್?ನ್ಯಾಯಾಧೀಶರು ಮತ್ತು ಜೆ.ಎಂ.ಎಫ್?ಸಿ., ಚಳ್ಳಕೆರೆ.**

**ಸಿ.ಸಿ ನಂ.614/2020**

| | | | |
|---|---|---|---|
| ಸಾಕ್ಷಿದಾರರ ಹೆಸರು | : | ರೆಹಮತ್ ಉಲ್ಲಾ | ಪಿ.ಡಬ್ಲ್ಯೂ: 05 |
| ತಂದೆಯ ಹೆಸರು | : | ಭಾಷಾ ಸಾಬ್ | ಸಿ.ಡಬ್ಲ್ಯೂ: 08 |
| ವಯಸ್ಸು | : | ಸು. 65 ವರ್ಷ | |
| ಉದ್ಯೋಗ | : | ಟೈರ್ ಪಂಚರಿಂಗ್ ಕೆಲಸ | |
| ವಾಸ | : | ಹಿರಿಯೂರು ಟೌನ್ | |

ದಿನಾಂಕ 12.01.2023 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಸಾಕ್ಷಿಗೆ ನಿಪಿಃ 4 ಮಾಲು ಬಿಡುಗಡೆ ಪಂಚನಾಮೆಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿಃ 4(ಬಿ) ಅಂತ ಗುರುತಿಸಲಾಯಿತು. ಸದರಿ ಸಹಿಯನ್ನು ನಾನು ಈಗ್ಗೆ 1 ವರ್ಷಗಳ ಹಿಂದೆ ಹಿರಿಯೂರು ಸರ್ಕಲ್ ಇನ್ಸ್ ಪೆಕ್ಟರ್ ಕಚೇರಿಯಲ್ಲಿ ಮಾಡಿರುತ್ತೇನೆ. ಸದರಿ ಸಹಿಯನ್ನು ಯಾವ ಕಾರಣಕ್ಕಾಗಿ ಮಾಡಿರುತ್ತೇನೆ ಅಂತ ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಬಿಡುಗಡೆ ಮಾಡಿರುವುದಿಲ್ಲ. ನಿಪಿಃ 4 ರಲ್ಲಿ ಏನು ಬರೆದಿರುತ್ತಾರೆ ಅಂತ ನನಗೆ ಗೊತ್ತಿಲ್ಲ. ಪೊಲೀಸರ ಕೋರಿಕೆಯ ಮೇರೆಗೆ ನಿಪಿಃ 4 ಕ್ಕೆ ಸಹಿ ಮಾಡಿರುತ್ತೇನೆ.

ಸಾಕ್ಷಿಗೆ ನಿಪಿಃ 5 ಭಾವಚಿತ್ರವನ್ನು ತೋರಿಸಲಾಗಿ ಸಾಕ್ಷಿಯು ಅದರಲ್ಲಿ ತನ್ನ ಇರುವಿಕೆಯನ್ನು ಗುರುತಿಸಿಕೊಂಡಿರುತ್ತಾರೆ. ಸದರಿ ಭಾವಚಿತ್ರವನ್ನು ಎಲ್ಲಿ ಮತ್ತು ಏತಕ್ಕಾಗಿ ತೆಗೆದಿರುತ್ತಾರೆ ಅಂತ ನನಗೆ ಗೊತ್ತಿಲ್ಲ.

**(ಈ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾನೆ. ಸಹಾಯಕ ಸರ್ಕಾರಿ ಅಭಿಯೋಜಕರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿರುತ್ತಾರೆ. ಅನುಮತಿಸಿದೆ)**

**ಪಾಟೀ ಸವಾಲು ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ದಿಃ 02.01.2018 ರಂದು ಚಿತ್ರದುರ್ಗ ನಗರ ವೃತ್ತ ಕಚೇರಿಯಲ್ಲಿ ನಾನು ಮತ್ತು ಚಾಸಾ.7 ರವರ ಸಮಕ್ಷಮ ಮೊಕದ್ದಮೆ ನಂ. 12/2017 ರಂತೆ ಕಳುವಾದ ಮಾಲುಗಳನ್ನು ಅಮಾನತುಪಡಿಸಿಕೊಂಡಿದ್ದು, ನ್ಯಾಯಾಲಯದ ಆದೇಶದ ಮೇರೆಗೆ ಸದರಿ ಮಾಲುಗಳನ್ನು ವಾರಸುದಾರರಿಗೆ ಬಿಟ್ಟುಕೊಡಲು ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಪಂಚನಾಮೆಯಲ್ಲಿ ಮಾಲು ಪಟ್ಟಿ ನಂ. 12/2017 ರ ಕ್ರಮ ಸಂಖ್ಯೆಃ 6 ರಿಂದ 15 ರವರೆಗಿನ ಮಾಲುಗಳನ್ನು ಬಿಟ್ಟುಕೊಟ್ಟಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಮಾಲು ಚಾಸಾ.1 ರವರಿಗೆ ಸಂಬಂಧಿಸಿದ್ದು ಎಂದರೆ ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪಂಚನಾಮೆಯನ್ನು ಸಂಜೆ 6.00 ರಿಂದ 6.45 ರವರೆಗೆ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಪಂಚನಾಮೆಯ ಸಮಯದಲ್ಲಿ ನಾನು ಮತ್ತು ಚಾಸಾ.7 ರವರು ಸಹಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ನಿಪಿಃ 5 ರಂತೆ ಭಾವಚಿತ್ರ ತೆಗೆಸಿರುತ್ತಾರೆ ಎಂದರೆ ಸರಿಯಲ್ಲ. ಈ ಮೇಲಿನ ಎಲ್ಲಾ ವಿಚಾರ ನನಗೆ ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು ಃ ಆರೋಪಿತನ ಪರ ವಕೀಲರಿಂದಃ**

ಪಾಟೀ ಸವಾಲು ಇರುವುದಿಲ್ಲ ಅಂತ ನುಡಿದಿರುತ್ತಾರೆ.

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು).

ಓ.ಹೇ.ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್?ಸಿ., ಚಳ್ಳಕೆರೆ.